TIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
DATE : 29/08/2019

# ಕಬ್ಬು ಬೆಳೆಗಾರರಿಗೆ ಕೇಂದ್ರ ಭರ್ಜರಿ ಆಫರ್

## 6,268 ಕೋಟಿ ರು. ಸಕ್ಕರೆ ರಫ್ತು ಸಬ್ಸಿಡಿ | ಪ್ರತಿ ಟನ್ ಮೇಲೆ ಸರ್ಕಾರದಿಂದ 10,448 ರು ಪಾವತಿ

**ನವದೆಹಲಿ:** ಹೆಚ್ಚುವರಿಯಾಗಿ ದಾಸ್ತಾನಿರುವ 60 ಲಕ್ಷ ಟನ್‌ಗಳಷ್ಟು ಸಕ್ಕರೆ ರಫ್ತಿಗಾಗಿ ₹6,268 ಕೋಟಿ ಸಹಾಯಧನ ನೀಡುವುದಾಗಿ ಕೇಂದ್ರ ಸರ್ಕಾರ ಬುಧವಾರ ಪ್ರಕಟಿಸಿದೆ. ಸಕ್ಕರೆ ಕಾರ್ಖಾನೆಗಳು ಬಾಕಿ ಉಳಿಸಿಕೊಂಡ ಕಬ್ಬಿನ ಹಣಕ್ಕೆ ಪ್ರತಿಯಾಗಿ ರೈತರ ಖಾತೆಗೆ ನೇರವಾಗಿ ಸಬ್ಸಿಡಿ ಹಣ ಪಾವತಿಯಾಗಲಿರುವುದರಿಂದ ಕರ್ನಾಟಕ ಸೇರಿ ವಿವಿಧ ರಾಜ್ಯಗಳ ಕಬ್ಬು ಬೆಳೆಗಾರರಿಗೆ ಇದರ ಲಾಭ ದೊರೆಯಲಿದೆ.



ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ನಡೆದ ಆರ್ಥಿಕ ವ್ಯವಹಾರಗಳ ಸಂಪುಟ ಸಮಿತಿ ಸಭೆಯಲ್ಲಿ, ಅಕ್ಟೋಬರ್‌ನಿಂದ ಆರಂಭವಾಗಲಿರುವ ಮುಂದಿನ ಮಾರುಕಟ್ಟೆ ವರ್ಷದಿಂದ ಅನ್ವಯವಾಗುವಂತೆ ಸಕ್ಕರೆ ರಫ್ತಿಗೆ ಸಹಾಯ ಧನ ನೀಡುವ ಪ್ರಸ್ತಾವನೆಗೆ ಅನುಮೋದನೆ ನೀಡಲಾಗಿದೆ. ಪ್ರತಿ ಟನ್ ಮೇಲೆ ಸಕ್ಕರೆ ಕಾರ್ಖಾನೆಗಳಿಗೆ 10,448 ರು. ಸಬ್ಸಿಡಿಯನ್ನು ಸರ್ಕಾರ ನೀಡಲಿದೆ. ಸುಮಾರು 60 ಲಕ್ಷ ಟನ್‌ನಷ್ಟು ಸಕ್ಕರೆ ರಫ್ತಿಗೆ ಸಬ್ಸಿಡಿ ನೀಡಲು ಅನುಮೋದನೆ ನೀಡಲಾಗಿದ್ದು, ಸರ್ಕಾರದ ಬೊಕ್ಕಸಕ್ಕೆ 6,268 ಕೋಟಿ ರು. ಹೊರೆಯಾಗಲಿದೆ. ಇದರಿಂದ ಕರ್ನಾಟಕ, ಮಹಾರಾಷ್ಟ್ರ, ಉತ್ತರ ಪ್ರದೇಶ ಹಾಗೂ ಕಬ್ಬು ಬೆಳೆಯುವ ಇತರ ರಾಜ್ಯಗಳ ರೈತರಿಗೆ ಪ್ರಯೋಜನ ಆಗಲಿದೆ ಎಂದು ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಪ್ರಕಾಶ್ ಜಾವಡೇಕರ್ ಸಂಪುಟ ಸಭೆ ಬಳಿಕ ತಿಳಿಸಿದ್ದಾರೆ.

**ರೈತರ ಖಾತೆಗೆ ನೇರ ವರ್ಗ:** ಸಕ್ಕರೆ ಕಾರ್ಖಾನೆಗಳು ಬಾಕಿ ಉಳಿಸಿಕೊಂಡಿರುವ ಕಬ್ಬಿನ ಬಾಕಿ ಹಣಕ್ಕೆ ಪ್ರತಿಯಾಗಿ ಸರ್ಕಾರದ ಸಹಾಯಧನ ನೇರವಾಗಿ ರೈತರ ಖಾತೆಗೆ ವರ್ಗಾವಣೆಯಾಗಲಿದೆ. ಉಳಿದ ಹಣವನ್ನು ಸಕ್ಕರೆ ಕಾರ್ಖಾನೆಗಳ ಖಾತೆಗೆ ಜಮಾ...

## 75 ಹೊಸ ವೈದ್ಯಕೀಯ ಕಾಲೇಜು ಸ್ಥಾಪನೆ: ಕೇಂದ್ರ

**ನವದೆಹಲಿ:** 2021-22ರ ವೇಳೆಗೆ ಹೊಸದಾಗಿ 75 ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸಲು ಸರ್ಕಾರ ಅನುಮೋದನೆ ನೀಡಿದೆ.

ಆರ್ಥಿಕ ವ್ಯವಹಾರಗಳ ಸಂಪುಟ ಸಭೆಯಲ್ಲಿ ಬುಧವಾರ ಈ ನಿರ್ಧಾರ ಕೈಗೊಳ್ಳಲಾಗಿದೆ. ಹೊಸ ವೈದ್ಯಕೀಯ ಕಾಲೇಜುಗಳ ಸ್ಥಾಪನೆಯಿಂದ 15,700 ಎಂಬಿಬಿಎಸ್ ಸೀಟುಗಳು ಹೆಚ್ಚುವರಿಯಾಗಿ ಸೇರ್ಪಡೆ ಆಗಲಿವೆ. ಕನಿಷ್ಠ 200 ಹಾಸಿಗೆಯ ಜಿಲ್ಲಾಸ್ಪತ್ರೆಯನ್ನು ಹೊಂದಿರುವ ಹಾಗೂ ವೈದ್ಯಕೀಯ ಕಾಲೇಜುಗಳು ಇಲ್ಲದ ಸ್ಥಳದಲ್ಲಿ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸಲಾಗುವುದು ಎಂದು ಸರ್ಕಾರದ ಹೇಳಿಕೆಯಲ್ಲಿ ತಿಳಿಸಲಾಗಿದೆ.

ಹೊಸ ವೈದ್ಯಕೀಯ ಕಾಲೇಜುಗಳು ಈಗಿರುವ ಜಿಲ್ಲಾಸ್ಪತ್ರೆ ಅಥವಾ ಉಲ್ಲೇಖಿಸಲಾದ ಆಸ್ಪತ್ರೆಗಳಿಗೆ ಹೊಂದಿಕೊಂಡಂತೆ ಸ್ಥಾಪನೆ ಆಗಲಿವೆ. ಇದರಿಂದಾಗಿ ಗುಣ ಮಟ್ಟದ ವೈದ್ಯರ ಲಭ್ಯತೆ, ಸುಧಾರಿತ ಪ್ರಾದೇಶಿಕ ಆರೋಗ್ಯ ಸೇವೆ, ಆಸ್ಪತ್ರೆಗಳಲ್ಲಿ ಈಗಿರುವ ಮೂಲ ಸೌಕರ್ಯಗಳನ್ನು...

## ಸಿಂಗಲ್ ಬ್ರ್ಯಾಂಡ್ ಎಫ್‌ಡಿಐ ನಿಯಮ ಸಡಿಲ

**ನವದೆಹಲಿ:** ಒಂದೇ ಬ್ರ್ಯಾಂಡಿನ ವಿದೇಶಿ ಉತ್ಪನ್ನಗಳ ವಿದೇಶಿ ನೇರ ಬಂಡವಾಳ ಹೂಡಿಕೆ (ಎಫ್‌ಡಿಐ) ನಿಯಮವನ್ನು ಕೇಂದ್ರ ಸರ್ಕಾರ ಸಡಿಲಗೊಳಿಸಿದೆ. ಜೊತೆಗೆ ದೇಶೀಯ ಉತ್ಪಾದನೆ ಹೆಚ್ಚಿಸಲು ಕಲ್ಲಿದ್ದಲು ಗಣಿಗಾರಿಕೆ ಹಾಗೂ ಒಪ್ಪಂದ ಉತ್ಪಾದನೆಯಲ್ಲಿ ಶೇ.100ರಷ್ಟು ಎಫ್‌ಡಿಐಗೆ ಕೇಂದ್ರ ಸಚಿವ ಸಂಪುಟ ಸಭೆ ಬುಧವಾರ ಅನುಮೋದನೆ ನೀಡಿದೆ.

ಸ್ವಯಂಚಾಲಿತ ಮಾರ್ಗದ ಮೂಲಕ ಕಲ್ಲಿದ್ದಲು ಗಣಿಗಾರಿಕೆ ಹಾಗೂ ಅದಕ್ಕೆ ಸಂಬಂಧಿಸಿದ ಮೂಲ ಸೌಕರ್ಯ ಅಭಿವೃದ್ಧಿಗೆ ಶೇ.100 ಎಫ್‌ಡಿಐಗೆ ಅನುಮೋದನೆ ನೀಡಲಾಗಿದೆ. ಅಲ್ಲದೇ ವಿದೇಶಿ ಕಂಪನಿಗಳು ಒಪ್ಪಂದಂತೆ ಉತ್ಪಾದನೆ ಕೈಗೊಳ್ಳಲು ಶೇ.100 ಎಫ್‌ಡಿಐಗೆ ಅವಕಾಶ ನೀಡಲಾಗಿದೆ. ಒಂದೇ ಬ್ರ್ಯಾಂಡಿನ ವಿದೇಶಿ ಉತ್ಪನ್ನಗಳು ಶೇ.30ರಷ್ಟು ದೇಶಿಯ ಸಂಪನ್ಮೂಲ ಬಳಸಬೇಕು ಎಂಬ ಷರತ್ತನ್ನು ಸಡಿಲಿಸಲಾಗಿದೆ. ಜೊತೆಗೆ ಭಾರತದಲ್ಲಿ ಮಳಿಗೆ ಆರಂಭಿಸದ ಹೊರತೂ ಆನ್‌ಲೈನ್ ಮೂಲಕ ಉತ್ಪನ್ನ ಮಾರುವಂತಿಲ್ಲ ಎಂಬ ನಿಯಮವನ್ನೂ...